# ಭವಿಷ್ಯದ ಲಾಭಕ್ಕಾಗಿ ಬಿಜೆಪಿ ತ್ಯಾಗದ ಮಾರ್ಗ!

• ಶಂಕರ ಪಾಗೋಜಿ

**ಧರ್ಮೇಗೌಡರಿಂದ ತೆರವಾದ ಸ್ಥಾನ ಜೆಡಿಎಸ್‌ಗೆ ಬಿಟ್ಟುಕೊಡಲು ನಿರ್ಧಾರ**

**ಪರಿಷತ್ ಸದಸ್ಯತ್ವದ ಮೇಲೆ ಕಣ್ಣಿಟ್ಟಿದ್ದವರಿಗೆ ನಿರಾಸೆ**

ಬೆಂಗಳೂರು: ಜೆಡಿಎಸ್ ಜತೆ ನಿಕಟವಾಗುವತ್ತ ಒಂದೊಂದೇ ಹೆಜ್ಜೆ ಇಡುತ್ತಿರುವ ಬಿಜೆಪಿ, ಭವಿಷ್ಯದ ಲಾಭದ ಲೆಕ್ಕಾಚಾರದಲ್ಲಿ ಈಗ ವಿಧಾನ ಪರಿಷತ್‌ನಲ್ಲಿ ತ್ಯಾಗ ಮಾರ್ಗ ಅನುಸರಿಸುತ್ತಿದೆ.

ಪರಿಷತ್ತಿನಲ್ಲಿ ಹೆಚ್ಚು ಸದಸ್ಯರನ್ನು ಹೊಂದಿದ್ದರೂ ಜೆಡಿಎಸ್‌ಗೆ ಸಭಾಪತಿ ಸ್ಥಾನ ಬಿಟ್ಟುಕೊಡಲು ನಿರ್ಧರಿಸಿರುವ ಬಿಜೆಪಿ, ಖಾಲಿ ಇರುವ ಒಂದು ಸ್ಥಾನವನ್ನೂ ಜೆಡಿಎಸ್‌ಗೇ ಬಿಟ್ಟುಕೊಡಲು ನಿರ್ಧರಿಸಿದೆ. ಇದರಿಂದ ಪರಿಷತ್ ಸದಸ್ಯತ್ವದ ಮೇಲೆ ಕಣ್ಣಿಟ್ಟಿದ್ದ ಬಿಜೆಪಿಯ ಆಕಾಂಕ್ಷಿಗಳಿಗೆ ನಿರಾಸೆಯಾಗಿದೆ. ವಿಧಾನಸಭೆಯಲ್ಲಿ ಸ್ಪಷ್ಟ ಬಹುಮತ ಇರುವ ಕಾರಣ, ಪರಿಷತ್ತಿನ ಉಪ ಸಭಾಪತಿ ಆಗಿದ್ದ ಧರ್ಮೇಗೌಡರ ನಿಧನದಿಂದ ತೆರವಾಗಿರುವ ಸ್ಥಾನವನ್ನು ಅನಾಯಾಸವಾಗಿ ಗೆಲ್ಲುವ ಅವಕಾಶ ಹೊಂದಿದೆ. ▶ 8ನೇ ಪುಟಕ್ಕೆ

## ಬಿಜೆಪಿಯ ಆಕಾಂಕ್ಷಿಗಳಿಗೆ ನಿರಾಸೆ?

ಎಸ್.ಎಲ್. ಧರ್ಮೇಗೌಡ ನಿಧನಾನಂತರ ಖಾಲಿಯಾಗಿದ್ದ ಸ್ಥಾನದ ಮೇಲೆ ಬಿಜೆಪಿಯ ಹಲವು ಆಕಾಂಕ್ಷಿಗಳು ಕಣ್ಣಿಟ್ಟು, ಪರಿಷತ್ ಪ್ರವೇಶ ಪಡೆಯಲು ತಮ್ಮ ಬಯೋಡೇಟಾ ಸಿದ್ಧಪಡಿಸಿ ಕೊಳ್ಳುತ್ತಿದ್ದಾರೆಂದು ಹೇಳಲಾಗುತ್ತಿದೆ. ಕೇಂದ್ರ ಎಸ್ಸಿ ಎಸ್ಟಿ ಆಯೋಗದ ಮಾಜಿ ಸದಸ್ಯ ಜಗದೀಶ್ ಹಿರೇಮನಿ, ಸಂಘ ಪರಿವಾರದ ಆರೋಗ್ಯ ಭಾರತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಡಾ. ನಿರಂತರ ಗಣೇಶ್ ಸೇರಿದಂತೆ ಹಲವರು ಖಾಲಿ ಸ್ಥಾನದ ಆಕಾಂಕ್ಷಿಗಳಾಗಿದ್ದಾರೆ ಎನ್ನಲಾಗಿದೆ.

# ಭವಿಷ್ಯದ ಲಾಭಕ್ಕಾಗಿ ಬಿಜೆಪಿ ತ್ಯಾಗದ ಮಾರ್ಗ

1ನೇ ಪುಟದಿಂದ ▶ ಆದರೆ, ಖಾಲಿಯಾಗಿರುವ ಈ ಸ್ಥಾನವನ್ನೂ ಜೆಡಿಎಸ್‌ಗೆ ಬಿಟ್ಟುಕೊಡಲು ನಿರ್ಧರಿಸಲಾಗಿದೆ ಎಂದು ತಿಳಿದು ಬಂದಿದೆ. ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ. ನಡ್ಡಾ ಹಾಗೂ ಜೆಡಿಎಸ್ ವರಿಷ್ಠ ಎಚ್.ಡಿ.ದೇವೇಗೌಡರ ನಡುವೆ ನಡೆದಿರುವ ಮಾತುಕತೆಯ ಹಿನ್ನೆಲೆಯಲ್ಲಿ ಜೆಡಿಎಸ್‌ಗೆ ಸಭಾಪತಿ ಸ್ಥಾನದ ಜೊತೆಗೆ ಖಾಲಿ ಇರುವ ಒಂದು ವಿಧಾನ ಪರಿಷತ್ ಸ್ಥಾನವನ್ನು ಬಿಟ್ಟುಕೊಡಲು ತೀರ್ಮಾನಿಸಲಾಗಿದೆ ಎಂಬ ಮಾತುಗಳು ಬಿಜೆಪಿ ವಲಯದಲ್ಲಿ ಕೇಳಿ ಬರುತ್ತಿವೆ.

ವಿಧಾನ ಸಭೆಯಲ್ಲಿ ಬಿಜೆಪಿ 118 ಶಾಸಕರನ್ನು ಹೊಂದಿದ್ದು, ಜೆಡಿಎಸ್ ಕೇವಲ 33 ಸದಸ್ಯರನ್ನು ಹೊಂದಿದೆ. ವಿಧಾನಸಭೆಯಿಂದ ವಿಧಾನ ಪರಿಷತ್ತಿಗೆ ನಡೆಯುವ ಒಂದು ಸ್ಥಾನದ ಚುನಾವಣೆಗೆ ಬಿಜೆಪಿ ಅಭ್ಯರ್ಥಿ ಆಯ್ಕೆಯಾಗಲು ಸಂಖ್ಯಾಬಲದ ಕೊರತೆಯಿಲ್ಲ. ಆದರೂ, ಬಿಜೆಪಿ ಹೈಕಮಾಂಡ್ ಜೆಡಿಎಸ್‌ಗೆ ಆ ಸ್ಥಾನ ಬಿಟ್ಟುಕೊಡಲು ನಿರ್ಧರಿಸಿದೆ ಎನ್ನಲಾಗಿದೆ.

**ಭವಿಷ್ಯದ ರಾಜಕೀಯ ಲೆಕ್ಕಾಚಾರ:** 2023ರ ವಿಧಾನಸಭೆ ಚುನಾವಣೆಯಲ್ಲಿಯೂ ಯಾವುದೇ ಪಕ್ಷ ಸರಳ ಬಹುಮತ ಪಡೆಯುವ ಸಾಧ್ಯತೆ ಕಡಿಮೆಯಿದ್ದು, ಆ ಸಂದರ್ಭದಲ್ಲಿ ಕರ್ನಾಟಕದಲ್ಲಿ ಸರ್ಕಾರ ರಚನೆಗೆ ಜೆಡಿಎಸ್ ಬೆಂಬಲ ಅಗತ್ಯವಿರುವುದರಿಂದ ಆ ಪಕ್ಷವನ್ನು ಈಗಿನಿಂದಲೇ ಜೊತೆಯಲ್ಲಿಟ್ಟುಕೊಳ್ಳುವ ಲೆಕ್ಕಾಚಾರವನ್ನು ಬಿಜೆಪಿ ಹೈಕಮಾಂಡ್ ಹಾಕಿಕೊಂಡಿದೆ ಎಂದು ಹೇಳಲಾಗಿದೆ.

ದೇಶದಲ್ಲಿ ಕಾಂಗ್ರೆಸ್ ಅನ್ನು ಅಧಿಕಾರದಿಂದ ದೂರ ಇಡಬೇಕಾದರೆ ಪ್ರಾದೇಶಿಕ ಪಕ್ಷಗಳನ್ನು ಜೊತೆಗಿಟ್ಟುಕೊಳ್ಳುವುದು ಅನಿವಾರ್ಯ ಎಂಬ ಯೋಚನೆ ಬಿಜೆಪಿ ನಾಯಕರದ್ದು. 2018 ರ ವಿಧಾನಸಭೆ ಚುನಾವಣೆ ಫಲಿತಾಂಶ ಬಂದ ನಂತರ ಜೆಡಿಎಸ್ ಬಿಜೆಪಿ ಬದಲು ಕಾಂಗ್ರೆಸ್ ಜೊತೆ ಕೈ ಜೋಡಿಸಿದ್ದರಿಂದ ಹೆಚ್ಚು ಸದಸ್ಯರನ್ನು ಹೊಂದಿದ್ದ ಪಕ್ಷವಾಗಿದ್ದರೂ ಬಿಜೆಪಿ ಅಧಿಕಾರ ವಂಚಿತವಾಗುವಂತಾಯಿತು. ಅದೇ ರೀತಿ ಭವಿಷ್ಯದಲ್ಲಿ ಜೆಡಿಎಸ್ ಕಾಂಗ್ರೆಸ್ ಜೊತೆ ಸ್ನೇಹ ಬೆಳೆಸಬಾರದು ಎಂಬ ಕಾರಣಕ್ಕೆ ಬಿಜೆಪಿ ಹೈಕಮಾಂಡ್ ಭವಿಷ್ಯದ ಲಾಭದ ಲೆಕ್ಕಾಚಾರ ಇಟ್ಟುಕೊಂಡು ಈಗ ಜೆಡಿಎಸ್‌ಗೆ ಸಭಾಪತಿ ಜೊತೆಗೆ ಒಂದು ಸದಸ್ಯ ಸ್ಥಾನವನ್ನು ತ್ಯಾಗ ಮಾಡಲು ನಿರ್ಧರಿಸಿದೆ ಎಂದು ಹೇಳಲಾಗುತ್ತಿದೆ.